**All India Radio: Bangalore**
**Regional Bulletin In Kannada**
**10.07.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**10.07.2025 / 2.30 p.m.**

**<><><><>**

ಮುಖ್ಯಾಂಶಗಳು

1. ಅಂಚೆ ಇಲಾಖೆಯನ್ನು ಲಾಭ ತರುವ ಇಲಾಖೆಯನ್ನಾಗಿ ಪರಿವರ್ತಿಸುವ ಗುರಿ - ಕೇಂದ್ರ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ
2. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
3. ಬೆಂಗಳೂರಿನ ತೆಂಗು ನಾರಿನ ಅಭಿವೃದ್ಧಿ ಸಂಸ್ಥೆಯಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪರಿಶೀಲನೆ
4. ವಿದೇಶಗಳಲ್ಲಿನ ಆಸ್ತಿ ಬಹಿರಂಗ ಪಡಿಸದ ಆರೋಪ ; ಶಾಸಕ ಸುಬ್ಬಾರೆಡ್ಡಿ ನಿವಾಸದ ಮೇಲೆ ಇಡಿ ಅಧಿಕಾರಿಗಳಿಂದ ದಾಳಿ
5. ಮೈಸೂರು ವಿಶ್ವವಿದ್ಯಾನಿಲಯದಿಂದ ಪರೀಕ್ಷಾ ಸುಧಾರಣೆ ; ಒಂದೇ ಸೂರಿನಡಿ ಸ್ನಾತಕೋತ್ತರ ಪದವಿ ಪರೀಕ್ಷೆ

<><><><>

ರಾಜ್ಯದ ಅಂಚೆ ಸೇವೆಯನ್ನು ಕೇಂದ್ರ ಸಂವಹನ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ಶ್ಲಾಘಿಸಿದ್ದಾರೆ. ಬೆಂಗಳೂರಿನ ಟೌನ್‌ಹಾಲ್‌ನಲ್ಲಿಂದು ಕರ್ನಾಟಕ ಅಂಚೆ ವೃತ್ತದ ಗ್ರಾಮೀಣ ಡಾಕ್ ಸೇವಕರ ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಡಾಕ್ ಸೇವೆ ಅಂದರೆ ಜನಸೇವೆ ಎಂದು ಪ್ರತಿಪಾದಿಸಿದ್ದಾರೆ. ಕರ್ನಾಟಕದ ಅಂಚೆ ಸೇವೆ ವಾರ್ಷಿಕವಾಗಿ ಸುಮಾರು ೧೦೦ ಕೋಟಿಗೂ ಹೆಚ್ಚು ಪಾರ್ಸೆಲ್ ಹಾಗೂ ಅಂಚೆ ಸೇವೆಯನ್ನು ನೀಡುತ್ತಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಜ್ಯೋತಿರಾಧಿತ್ಯ ಸಿಂಧಿಯಾ**

ಮುಂಬರುವ ದಿನಗಳಲ್ಲಿ ದೇಶದಲ್ಲೇ ಅಂಚೆ ಇಲಾಖೆಯನ್ನು ಲಾಭ ತರುವ ಇಲಾಖೆಯಾನ್ನಾಗಿ ಪರಿವರ್ತಿಸಲಾಗುವುದು ಎಂದು ಹೇಳಿದ್ದಾರೆ. ವಿಶ್ವದಲ್ಲೇ ಭಾರತದ ಅಂಚೆ ಇಲಾಖೆ ಅತ್ಯುನ್ನತ ಸ್ಥಾನದಲ್ಲಿದ್ದು, ವಿಶ್ವದಲ್ಲಿಯೇ ಹಳ್ಳಿಗಳಲ್ಲಿಯೂ ಸೇವೆ ಸಲ್ಲಿಸುವ ಏಕೈಕ ಇಲಾಖೆ ಅಂಚೆ ಇಲಾಖೆ. ಅಂಚೆ ಇಲಾಖೆಯಿಂದಾಗಿ ದೇಶದ ಪ್ರತಿಯೊಂದು ತಾಯಿಯು ಪಿಂಚಣಿ ಯೋಜನೆಯನ್ನು ಪಡೆಯುವಂತಾಗಿದೆ ಎಂದು ಶ್ಲಾಘಿಸಿದ್ದಾರೆ. ಇದೇ ವೇಳೆ ನಡೆದ ಸಂವಾದದಲ್ಲಿ ರಾಜ್ಯಾದ್ಯಂತ ಕಾರ್ಯ ನಿರ್ವಹಿಸುತ್ತಿರುವ ೮೦೦ ಗ್ರಾಮೀಣ ಡಾಕ್ ಸೇವಕರೊಂದಿಗೆ ಸಚಿವರು ಸಂವಾದ ನಡೆಸಿದರು. ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ರಾಜ್ಯದ ೧೫ ಗ್ರಾಮೀಣ ಡಾಕ್ ಸೇವಕರನ್ನು ಅವರು ಸನ್ಮಾನಿಸಿದರು.

**ಧ್ವನಿ : ಯಶವಂತ ಆಚಾರ್ (ಡಾಕ್ ಸೇವಕ)**

<><><><>

ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ, ತಾವೇ ಐದು ವರ್ಷ ಮುಂದುವರೆಯುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ನವದೆಹಲಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಯಾವ ರಾಜಕೀಯ ಕ್ರಾಂತಿಯು ಆಗಲ್ಲ ಎಂದು ತಿಳಿಸಿದ್ದಾರೆ. ನಾಯಕತ್ವ ಬದಲಾವಣೆ ಬಗ್ಗೆ ಪಕ್ಷದಲ್ಲಿ ಯಾವುದೇ ಚರ್ಚೆ ನಡೆದಿಲ್ಲ. ಎಲ್ಲರೂ ಪಕ್ಷದ ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ಸಷ್ಟಪಡಿಸಿದ್ದಾರೆ.

<><><><>

ತೆಂಗಿನ ಚಿಪ್ಪಿಗೆ ವಿಶ್ವದಲ್ಲಿಯೇ ಅತಿ ಹೆಚ್ಚು ಬೇಡಿಕೆ ಇರುವುದರಿಂದ ಮುಂಬರುವ ದಿನಗಳಲ್ಲಿ ತೆಂಗಿನ ಬಗ್ಗೆ ಸಂಶೋಧನೆ ಮತ್ತು ಬೇಡಿಕೆ ಹೆಚ್ಚಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲಾಗುವುದು ಎಂದು ಕೇಂದ್ರ ಸೂಕ್ಷ್ಮ, ಸಣ್ಣ ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಕೇಂದ್ರದ ತೆಂಗು ನಾರಿನ ಅಭಿವೃದ್ಧಿ ಹಾಗೂ ತಂತ್ರಜ್ಞಾನ ಸಂಸ್ಥೆಗೆ ಭೇಟಿ ನೀಡಿ ಮಂಡಳಿಯ ಕಾರ್ಯ ಚಟುವಟಿಕೆಗಳನ್ನು ಪರಿಶೀಲನೆ ನಡೆಸಿದ ಬಳಿಕ, ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ನರ್ಸರಿಗಳಲ್ಲಿಯೂ ತೆಂಗಿನ ಉತ್ಪಾದನೆಗೆ ಬೇಡಿಕೆ ಹೆಚ್ಚುತ್ತಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಶೋಭಾ ಕರಂದ್ಲಾಜೆ**

<><><><>

ವಿದೇಶಗಳಲ್ಲಿ ಹೊಂದಿರುವ ಆಸ್ತಿ-ಪಾಸ್ತಿ ಬಹಿರಂಗಪಡಿಸದ ಆರೋಪಗಳಿಗೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಇಂದು ಚಿಕ್ಕಬಳ್ಳಾಪುರದ ಬಾಗೇಪಲ್ಲಿ ಶಾಸಕ ಸುಬ್ಬಾರೆಡ್ಡಿ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ. ಬೆಂಗಳೂರಿನ ೫ ಕಡೆ ದಾಳಿ ನಡೆಸಿರುವ ಇಡಿ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಶಾಸಕರ ಕಚೇರಿ ಹಾಗೂ ಬೆಂಬಲಿಗರ ನಿವಾಸದ ಮೇಲೂ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ವಿದೇಶಿ ಖಾತೆಗಳಲ್ಲಿನ ಬ್ಯಾಂಕ್ ಬ್ಯಾಲೆನ್ಸ್, ವಾಹನಗಳ ಮೇಲಿನ ಹೂಡಿಕೆ, ಮಲೇಷಿಯಾ, ಹಾಂಕಾಂಗ್ ಮತ್ತು ಜರ್ಮನಿಯಲ್ಲಿರುವ ಬಹಿರಂಗಪಡಿಸದ ಆಸ್ತಿಗಳ ಕುರಿತಂತೆ ಪರಿಶೀಲನೆ ನಡೆಸುತ್ತಿದ್ದಾರೆ.

<><><><>

ಶತಮಾನ ಪೂರೈಸಿರುವ ಮೈಸೂರು ವಿಶ್ವವಿದ್ಯಾನಿಲಯವು ಇದೇ ಮೊದಲ ಬಾರಿಗೆ ಸ್ನಾತಕೋತ್ತರ ಪದವಿ ಪರೀಕ್ಷೆಗಳನ್ನು ಒಂದೇ ಸೂರಿನಡಿ ನಡೆಸುವ ಮೂಲಕ ಪರೀಕ್ಷಾ ಚಟುವಟಿಕೆಗಳಲ್ಲಿ ಸುಧಾರಣೆಗೆ ಮುನ್ನುಡಿ ಬರೆದಿದೆ. ವಿಶ್ವವಿದ್ಯಾನಿಲಯದ ೫೪ ವಿಭಾಗಗಳ ೧ನೇ ಮತ್ತು ನಾಲ್ಕನೇ ಸೆಮಿಸ್ಟರ್‌ಗಳಲ್ಲಿ ಓದುತ್ತಿರುವ ಒಟ್ಟು ೪ ಸಾವಿರದ ೫೦೦ ವಿದ್ಯಾರ್ಥಿಗಳು ಒಂದೇ ಸೂರಿನಡಿ ಪರೀಕ್ಷೆ ಬರೆಯುತ್ತಿದ್ದಾರೆ. ಪರೀಕ್ಷೆಗಳು ಎರಡು ಅವಧಿಗಳಲ್ಲಿ ನಡೆಯುತ್ತಿವೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಮೌಲ್ಯಮಾಪನ ಕುಲಸಚಿವ ಪ್ರೊ.ಎನ್.ನಾಗರಾಜು ತಿಳಿಸಿದ್ದಾರೆ. ಈವರೆಗೆ ಆಯಾಯ ಅಧ್ಯಯನ ವಿಭಾಗಗಳಲ್ಲೇ ಪರೀಕ್ಷೆಗಳನ್ನು ನಡೆಸ ಲಾಗುತ್ತಿತ್ತು, ೧೦೧೫-೧೬ನೇ ಶೈಕ್ಷಣಿಕ ವರ್ಷದಲ್ಲಿ ಸ್ನಾತಕೋತ್ತರ ಪದವಿ ಪರೀಕ್ಷೆಗಳನ್ನು ಮೈಸೂರು ವಿವಿಯ ಮೌಲ್ಯಭವನದಲ್ಲಿ ನಡೆಸಲಾಗುತ್ತಿದೆ. ಪರೀಕ್ಷೆಗಳು ಜುಲೈ ೨ ರಿಂದಲೇ ಪ್ರಾರಂಭವಾಗಿದ್ದು, ಈ ಮೂಲಕ ಮೈಸೂರು ವಿವಿಯು ಮಹತ್ವದ ಹೆಜ್ಜೆ ಇರಿಸಿದೆ.

<><><><>

ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಅಚ್ಚುಕಟ್ಟು ಪ್ರದೇಶದ ನಾಲೆಗಳಿಗೆ ೧ ಸಾವಿರದ ೫೦೦ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದೆ. ಮಂಡ್ಯ ಜಿಲ್ಲೆಯಲ್ಲಿ ನಾಲಾ ಆಧುನೀಕರಣ ಕಾಮಗಾರಿ ನಡೆಯುತ್ತಿರುವುದರಿಂದ ನೀರು ಬಿಟ್ಟಿರಲಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೇಂದ್ರ ಸಚಿವ ಕುಮಾರಸ್ವಾಮಿ ಕಾಮಗಾರಿ ನಿಲ್ಲಿಸಿ ನೀರು ಬಿಡುವಂತೆ ಸೂಚಿಸಿದ್ದರು. ಅಣೆಕಟ್ಟು ಭರ್ತಿಯಾದರೆ ತಮಿಳುನಾಡು ಕಾವೇರಿ ನೀರಿಗೆ ಬೇಡಿಕೆ ಇಡುತ್ತದೆ ಎಂಬ ಆತಂಕದಿಂದ ರೈತರು ನೀರು ಬಿಡುವಂತೆ ಒತ್ತಡ ಹೇರಿದ್ದರು. ಒತ್ತಡಕ್ಕೆ ಮಣಿದ ಕಾವೇರಿ ನೀರಾವರಿ ನಿಗಮ ನೀರು ಬಿಡುಗಡೆ ಮಾಡಿದ್ದು, ರೈತರು ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದಾರೆ.

<><><>

ಹಾವೇರಿ ಜಿಲ್ಲೆಯಲ್ಲಿ ಹರಿಯುವ ವರದಾ ಹಾಗೂ ತುಂಗಭದ್ರಾ ನದಿಗಳಲ್ಲಿ ನೀರಿನ ಮಟ್ಟ ಕ್ರಮೇಣ ಹೆಚ್ಚಳವಾಗುತ್ತಿದ್ದು, ಅಪಾಯ ಮಟ್ಟದಲ್ಲಿ ಹರಿಯುತ್ತಿವೆ. ಈಗಾಗಲೇ ನದಿ ಭಾಗದ ಜನರಿಗೆ ಜಿಲ್ಲಾಡಳಿತ ಎಚ್ಚರಿಕೆ ಸಂದೇಶ ನೀಡಿದ್ದು, ನದಿಗೆ ಇಳಿಯದಂತೆ ಸೂಚಿಸಿದೆ. ಮೂರು ಸೇತುವೆಗಳು ಮುಳುಗಡೆಯಾಗಿದ್ದು, ಆರು ಗ್ರಾಮಗಳ ಜನರು, ತಮ್ಮ ನಿತ್ಯದ ಕೆಲಸಕ್ಕಾಗಿ ಪರ್ಯಾಯ ರಸ್ತೆಗಳ ಮೂಲಕ ಸಂಚರಿಸುತ್ತಿದ್ದಾರೆ. ಹಾವೇರಿ ಜಿಲ್ಲೆಯಲ್ಲಿಯೂ ಕೆಲದಿನಗಳಿಂದ ಉತ್ತಮ ಮಳೆಯಾಗುತ್ತಿದ್ದು, ಇಲ್ಲಿ ಸಂಗ್ರಹವಾದ ನೀರು ಸಹ ನದಿಗಳಿಗೆ ಸೇರುತ್ತಿದೆ.

<><><>

ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ತಿಪ್ಪನಟಗಿ ಗ್ರಾಮದಲ್ಲಿ ಮೃತರ ಸಾವಿಗೆ ಕಲುಷಿತ ನೀರು ಕಾರಣ ಅಲ್ಲ ಎಂಬುವುದು ಆರೋಗ್ಯ ಇಲಾಖೆಯ ವರದಿಯಿಂದ ತಿಳಿದುಬಂದಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಸ್ಪಷ್ಟನೆ ನೀಡಿದ್ದಾರೆ. ಮೃತಪಟ್ಟ ೩ ಜನ ಈ ಮೊದಲೇ ತೀವ್ರ ತರಹದ ಅನಾರೋಗ್ಯದಿಂದ ಬಳಲುತ್ತಿದ್ದು, ಅವರ ಸಾವಿಗೆ ಕಲುಷಿತ ನೀರು ಕಾರಣ ಅಲ್ಲ ಎಂಬುವುದು ಆರೋಗ್ಯ ಇಲಾಖೆಯ ವರದಿಯಿಂದ ದೃಢಪಟ್ಟಿದೆ. ಪ್ರಸ್ತುತ ತಿಪ್ಪನಟಗಿ ಗ್ರಾಮಕ್ಕೆ ಪೂರೈಕೆ ಮಾಡುತ್ತಿರುವ ಎಲ್ಲಾ ಜಲಮೂಲಗಳ ಕುಡಿಯುವ ನೀರಿನ ಮಾದರಿಗಳನ್ನು ಭೌತಿಕ, ಜೈವಿಕ, ಹಾಗೂ ರಾಸಾಯನಿಕ ಪರೀಕ್ಷೆಗೆ ಒಳಪಡಿಸಿದ್ದು, ನೀರು ಕುಡಿಯಲು ಯೋಗ್ಯವಿರುವುದಾಗಿ ವರದಿ ಬಂದಿದೆ.

<><><>

ರಾಜ್ಯದ ವಿವಿಧೆಡೆಗಳಲ್ಲಿ ಇಂದು ಗುರುಪೂರ್ಣಿಮಾ ಆಚರಿಸಲಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಗುರು ಪೂರ್ಣಿಮೆ ಅಂಗವಾಗಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಗುರುಪರಂಪರೆಯ ಶೃಂಗೇರಿ ಶಾರದಾ ಪೀಠದಲ್ಲಿ ಶ್ರೀ ಭಾರತಿತೀರ್ಥ ಸ್ವಾಮೀಜಿ, ವಿಧುಶೇಖರ ಸ್ವಾಮೀಜಿ ಅವರಿಂದ ಪೂಜೆ, ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿವೆ. ಗುರು ನಿವಾಸದಲ್ಲಿ ವ್ಯಾಸ ಪೂಜೆ, ಚಾತುರ್ಮಾಸ ಪೂಜೆ, ಗುರು ಶಂಕರಚಾರ್ಯರ ಪೂಜೆ, ಭಜನೆ ಕಾರ್ಯಕ್ರಮಗಳನ್ನು ನಡೆಸಲಾಗುತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಹರ್ಷಿ ವೇದವ್ಯಾಸರ ಸ್ಮರಣೆ ಅಂಗವಾಗಿ ಗುರುಸ್ಮರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಕೋಲಾರ ಜಿಲ್ಲೆಯಲ್ಲಿ ಗುರು ಪೂರ್ಣಿಮೆ ಅಂಗವಾಗಿ ಶಿರಡಿ ಸಾಯಿಬಾಬಾ ಮಂದಿರಗಳು ಹಾಗೂ ಶ್ರೀ ರಾಘವೇಂದ್ರ ಮಂದಿರಗಳಲ್ಲಿ ಬೆಳಿಗ್ಗೆಯಿಂದಲೇ ಪೂಜಾ ಕೈಂಕರ್ಯಗಳು ಜರುಗುತ್ತಿವೆ. ದಾವಣಗೆರೆ ಜಿಲ್ಲಾದ್ಯಂತ ಇಂದು ಗುರು

ಪೂರ್ಣಿಮೆಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಶಿರಡಿ ಸಾಯಿಬಾಬಾ ಮಂದಿರ, ಶ್ರೀ ಗುರು ದತ್ತಾತ್ರೇಯ ದೇವಾಲಯದಲ್ಲಿ ವಿಶೇಷ ಪೂಜೆಗಳು ನಡೆಯುತ್ತಿವೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ಇಂದು ಶಿವಶರಣ ವಚನಕಾರ ಹಡಪದ ಅಪ್ಪಣ್ಣ ಜಯಂತಿಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಪ್ರಕಾಶ್ ಮಾತನಾಡಿ, ಹಡಪದ ಅಪ್ಪಣ್ಣ ಹನ್ನೆರಡನೆಯ ಶತಮಾನದ ವಚನ ಚಳವಳಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಒಬ್ಬರಾಗಿದ್ದರು ಎಂದು ಸ್ಮರಿಸಿದರು. ಶಿವಶರಣ ಹಡಪದ ಅಪ್ಪಣ್ಣ ಅವರ ಹಾಗೆ ಉತ್ತಮ ಚಿಂತನೆ, ಆಲೋಚನೆ, ತತ್ವ ಬೋಧನೆ, ನಡೆ ನುಡಿಗಳನ್ನು ನಮ್ಮ ಜೀವನದ್ದಕ್ಕೂ ಅಳವಡಿಸಿಕೊಂಡು ನಡೆಯಬೇಕು ಎಂದು ಹುಬ್ಬಳ್ಳಿ ನಗರ ತಹಶೀಲ್ದಾರರಾದ ಮಹೇಶ ಗಸ್ತೆ ಅಭಿಪ್ರಾಯಪಟ್ಟಿದ್ದಾರೆ.

<><><><>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯ ಸುಮ್ಮನಹಳ್ಳಿ ವಿದ್ಯುತ್ ಚಿತಾಗಾರದಲ್ಲಿ ತುರ್ತು ನಿರ್ವಹಣೆ ಕೆಲಸದ ಪ್ರಯುಕ್ತ ೧೨ ದಿನಗಳ ಕಾಲ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗುತ್ತಿದೆ. ಸುಮ್ಮನಹಳ್ಳಿ ವಿದ್ಯುತ್ ಚಿತಾಗಾರದಲ್ಲಿ ಇದೇ ೧೬ ರಿಂದ ೨೭ರವರೆಗೆ ೧೨ ದಿನಗಳ ಕಾಲ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗುತ್ತಿದೆ. ಸಾರ್ವಜನಿಕರು ಸಮೀಪದಲ್ಲಿರುವ ಪೀಣ್ಯ, ಮೇಡಿ ಅಗ್ರಹಾರ ಅಥವಾ ಕೆಂಗೇರಿ ವಿದ್ಯುತ್ ಚಿತಾಗಾರವನ್ನು ಉಪಯೋಗಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>